# Kadamba Scholarship Programme

■ ಐಎಫ್‌ಎಸ್ ಅಧಿಕಾರಿ ಮಹಾಲಿಂಗ ಮದರಗಾಂವ್ ಅಭಿಮತ ■

## ಯುವಕರಿಗೆ ಮಾರ್ಗದರ್ಶನದ ಕೊರತೆ ಕಾಡುತ್ತಿದೆ



ಮಹಾಲಿಂಗ ಮದರಗಾಂವ್ ಅವರನ್ನು ಸ್ಫೂರ್ತಿ ಸ್ವಯಂ ಸೇವಾ ಸಂಸ್ಥೆಯಿಂದ ಸನ್ಮಾನಿಸಲಾಯಿತು.

ಬೀದರ್: ಜಿಲ್ಲೆಯಲ್ಲಿ ಸೂಕ್ತ ಮಾರ್ಗದರ್ಶನ ಮತ್ತು ಸ್ಪರ್ಧಾತ್ಮಕ ವಾತಾವರಣದ ಕೊರತೆಯಿಂದಾಗಿ ಯುವಕರು ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಹಿಂಜರಿಸುತ್ತಿದ್ದಾರೆ ಎಂದು ಐಎಫ್‌ಎಸ್ ಅಧಿಕಾರಿ ಮಹಾಲಿಂಗ ಮದರಗಾಂವ್ ಅಭಿಪ್ರಾಯಪಟ್ಟರು.

ಅವರು ನಗರದಲ್ಲಿ ಸ್ಫೂರ್ತಿ ಸ್ವಯಂ ಸೇವಾ ಸಂಸ್ಥೆ ವತಿಯಿಂದ ಆಯೋಜಿಸಿದ್ದ ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸುವುದು ಹೇಗೆ? ಕಾರ್ಯಾಗಾರ ಉದ್ಘಾಟಿಸಿ ಮಾತನಾಡಿ, ಜಿಲ್ಲೆಯಲ್ಲಿ ಪ್ರತಿಭಾವಂತರಿಗೆ ಕೊರತೆ ಇಲ್ಲ, ಅವರಿಗೆ ಸೂಕ್ತ ಮಾರ್ಗದರ್ಶನ ನೀಡುವುದು ಅಗತ್ಯವಾಗಿದೆ ಎಂದರು.

ಸ್ಪರ್ಧಾತ್ಮಕ ಪರೀಕ್ಷೆಗಳನ್ನು ಎದುರಿಸಲು ಯುವಕರಿಗೆ ಅನುಕೂಲವಾಗುವಂತೆ ವಿಶೇಷ ಗ್ರಂಥಾಲಯ ಸ್ಥಾಪಿಸುವ ಅಗತ್ಯವಿದೆ. ಜಿಲ್ಲೆಯ ಕೀರ್ತಿಯನ್ನು ರಾಷ್ಟ್ರ ಮತ್ತು ಅಂತಾರಾಷ್ಟ್ರೀಯ ಮಟ್ಟದಲ್ಲಿ ಪಸರಿಸಬೇಕಾದರೆ ಅತಿ ಹೆಚ್ಚು ನಾಗರಿಕ ಸೇವಾ ಅಭ್ಯರ್ಥಿಗಳನ್ನು ಸೃಷ್ಟಿಸಬೇಕಾಗಿದೆ. ಈ ಕಾರ್ಯಕ್ಕೆ ಸ್ಫೂರ್ತಿ ಸ್ವಯಂ ಸೇವಾ ಸಂಸ್ಥೆ ಮುಂದಾಗಿರುವುದು ಶ್ಲಾಘನೀಯ ಎಂದರು.

ಎಸ್ಸೆಸ್ಸೆಲ್ಸಿ ಮತ್ತು ಪಿಯುಸಿ ಪ್ರತಿಭಾವಂತರಿಗೆ ನೀಡುವ ಕದಂಬಾ ಶಿಷ್ಯ ವೇತನಕ್ಕೆ ಚಾಲನೆ ನೀಡಲಾಯಿತು. ವಿವಿಧ ನಾಗರಿಕ ಪರೀಕ್ಷೆಗಳನ್ನು ಬರೆಯಲು ತಯಾರಿ ನಡೆಸುತ್ತಿರುವ ಅಭ್ಯರ್ಥಿಗಳು ಭಾಗವಹಿಸಿದ್ದರು. ಸಂಸ್ಥೆಯ ಅಧ್ಯಕ್ಷೆ ಶಕುಂತಲಾ ಮೇತ್ರೆ ಸ್ವಾಗತಿಸಿದರು.

ಕನ್ನಡ ಪ್ರಭ. ಅಗಸ್ಟ್-7- 2010.